# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 11

ಮಾನ್ಯ ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 13-12-2021

ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1 | ರಾಜ್ಯದಲ್ಲಿ ಗ್ರಾಮೀಣ ಮಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ, ಅಗತ್ಯ ನುರಿತ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| 2 | ಹಾಗಿದ್ದಲ್ಲಿ, ಗ್ರಾಮೀಣ ಮಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳು ಮತ್ತು ಅಗತ್ಯ ನುರಿತ ಸಿಬ್ಬಂದಿಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಗ್ರಾಮೀಣ ಮಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳ ನಿರ್ವಹಣೆಗಾಗಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ವಾರ್ಷಿಕ ಮೂರು ಲಕ್ಷಗಳ ಅನುದಾನವನ್ನು ಮುಕ್ತನಿಧಿಯನ್ನಾಗಿ ನೀಡಲಾಗಿದೆ. ಇದಲ್ಲದೆ ಹೆಚ್ಚಿನ ಮೂಲಭೂತ ಸೌಕರ್ಯಗಳ ನಿರ್ವಹಣೆಗಾಗಿ ಅನುದಾನ ಬೇಕಾದಲ್ಲಿ ಆರೋಗ್ಯ ರಕ್ಷಾ ಸಮಿತಿಯಲ್ಲಿ ಲಭ್ಯವಿರುವ ಅನುದಾನವನ್ನು ಉಪಯೋಗಿಸಿಕೊಳ್ಳಬಹುದು. |
| 3 | ಬೆಳಗಾವಿ ಜಿಲ್ಲೆಯ ಹಲವು ಗ್ರಾಮೀಣ ಪ್ರಾಥಮಿಕ ಆರೋಗ್ಯ ಉಪ ಕೇಂದ್ರಗಳು ವರ್ಷಾನುಗಟ್ಟಲೇ ಮುಚ್ಚಿರಲು ಕಾರಣಗಳೇನು; | ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 6·6 ಉಪಕೇಂದ್ರಗಳಿದ್ದು, ಅದರಲ್ಲಿ 404 ಉಪಕೇಂದ್ರಗಳು ಸ್ವಂತ ಕಟ್ಟಡ ಹೊಂದಿದ್ದು, ಇವುಗಳಲ್ಲಿ ಚಿಕ್ಕೋಡಿ ವಿಭಾಗದ 107 ಹಾಗೂ ಬೆಳಗಾವಿ ವಿಭಾಗದ 95 ಕಟ್ಟಡಗಳು ವಾಸಿಸಲು ಯೋಗ್ಯವಾಗಿರುವುದಿಲ್ಲ. ಆದ್ದರಿಂದ ಸಂಬಂಧಪಟ್ಟ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು ಸ್ಥಳೀಯವಾಗಿ ಲಭ್ಯವಿರುವ ಬಾಡಿಗೆ ಕಟ್ಟಡಗಳಲ್ಲಿ ವಾಸಿಸುತ್ತಿದ್ದು ಸೇವೆಯನ್ನು ನೀಡುತ್ತಿದ್ದಾರೆ. |
| 4 | ಈ ಜಿಲ್ಲೆಯ ನೂರಾರು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಶಿಥಿಲಗೊಂಡು ಹಾಳಾಗಿದ್ದರೂ, ಅವುಗಳ ದುರಸ್ತಿ ಮತ್ತು ಮರು ನಿರ್ಮಾಣ ಕಾರ್ಯಗಳನ್ನು ಕೈಗೊಳ್ಳದಿರಲು ಕಾರಣವೇನು; | ಭಾರತ ದೇಶದ 75ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಅಮೃತ ಆರೋಗ್ಯ ಮೂಲಸೌಕರ್ಯಗಳ ಉನ್ನತೀಕರಣ ಯೋಜನೆಯಡಿಯಲ್ಲಿ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರೂ.20.00 ಲಕ್ಷದಂತೆ, ಒಂದು ಜಿಲ್ಲೆಯಲ್ಲಿ 25 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಗುರುತಿಸಿದ್ದು, ದುರಸ್ಥಿ ಕಾಮಗಾರಿ ಹಾಗೂ ಮೂಲಭೂತ ಸೌಲಭ್ಯಗಳಿಗೆ ಕ್ರಮ ಕೈಗೊಳ್ಳಲಾಗಿದೆ. ಇದಲ್ಲದೆ 2021-22ನೇ ಸಾಲಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಬಲಪಡಿಸಲು ಕೇಂದ್ರ ಸರ್ಕಾರದ 15ನೇ ಹಣಕಾಸು ಆಯೋಗದ |
| 5 | ಸದರಿ ಜಿಲ್ಲೆಯಲ್ಲಿ ಶಿಥಿಲಗೊಂಡ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ದುರಸ್ತಿ ಮಾಡಲು ಮತ್ತು ಸಿಬ್ಬಂದಿ | |

| | | |
|---|---|---|
| | ಕೊರತೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರವು ಏನೇನು ಕ್ರಮಗಳನ್ನು ಕೈಗೊಂಡಿದೆ; ಹಾಗೂ ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸುವುದು? | ವರದಿಯಂತೆ ರಾಜ್ಯ ಆರೋಗ್ಯ ವಲಯಕ್ಕೆ ಲೆಕ್ಕಶೀರ್ಷಿಕೆ 2210-06-800-00-04 ಅಡಿಯಲ್ಲಿ ರೂ. 552.00 ಕೋಟಿ ಅನುದಾನ ನಿಗದಿಯಾಗಿದ್ದು, ಈ ಅನುದಾನದಲ್ಲಿ ರಾಜ್ಯದ ಎಲ್ಲಾ ಉಪಕೇಂದ್ರಗಳು, ಗ್ರಾಮೀಣ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗುತ್ತಿದೆ.<br><br>ಆಸ್ಪತ್ರೆ ನಿರ್ಮಾಣ/ಉನ್ನತೀಕರಣ ಲೆಕ್ಕಶೀರ್ಷಿಕೆ 4210-01-110-1-01 ಅಡಿಯಲ್ಲಿ ರೂ.201.00 ಕೋಟಿಗಳು ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಇತರೆ ಆರೋಗ್ಯ ಸಂಸ್ಥೆಗಳ ಕಟ್ಟಡ ನಿರ್ವಹಣೆಗೆ ಲೆಕ್ಕಶೀರ್ಷಿಕೆ: 2210-01-110-1-21 ಅಡಿ ರೂ.25.00 ಕೋಟಿಗಳ ಅನುದಾನವನ್ನು ಮೀಸಲಿಡಲಾಗಿದೆ. ಅಲ್ಲದೆ, ಜಿಲ್ಲಾ ಪಂಚಾಯತ್ ಲೆಕ್ಕಶೀರ್ಷಿಕೆ" 2210-00-101-0-36 ಅಡಿಯಲ್ಲಿ ರೂ. 31.99 ಕೋಟಿ ಅನುದಾನವನ್ನು ಒದಗಿಸಲಾಗಿದೆ.<br><br>ಸರ್ಕಾರದ ವಿಶೇಷ ನೇಮಕಾತಿ ನಿಯಮಗಳ ಅಧಿಸೂಚನೆ ಸಂಖ್ಯೆ:ಹೆಚ್ ಎಫ್ ಡಬ್ಲ್ಯೂ 71 ಹೆಚ್ ಎಸ್ ಹೆಚ್ 2019, ದಿನಾಂಕ:16.06.2020ರನ್ವಯ ವಿಶೇಷ ನೇಮಕಾತಿ ವಿಭಾಗದಿಂದ ಹಿರಿಯ ವೈದ್ಯಾಧಿಕಾರಿಗಳು (ತಜ್ಞರು) /ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು /ದಂತ ಆರೋಗ್ಯ ಅಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಅರ್ಜಿಗಳನ್ನು ಆಹ್ವಾನಿಸಿ ವೈದ್ಯರ ಅಂತಿಮ ಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿದೆ.<br>ಇಲಾಖೆಯಲ್ಲಿ ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ/ತಜ್ಞ ವೈದ್ಯರ ಹುದ್ದೆಗಳನ್ನು 2020-21 ನೇ ಸಾಲಿನ ವಿಶೇಷ ನೇರ ನೇಮಕಾತಿ ಸಮಿತಿ ಮೂಲಕ ಈ ಕೆಳಕಂಡಂತೆ ಭರ್ತಿ ಮಾಡಲಾಗಿದೆ.<br><br>(table below)<br><br>106 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಮತ್ತು 49 ತಜ್ಞ ವೈದ್ಯರ ಹುದ್ದೆಗಳನ್ನು ವಿಶೇಷ ನೇರನೇಮಕಾತಿ ಸಮಿತಿಯ ಹೆಚ್ಚುವರಿ ಪಟ್ಟಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಚಾಲ್ತಿಯಲ್ಲಿದೆ ಹಾಗೂ 28 ಕೀಲು ಮತ್ತು ಮೂಳೆ ತಜ್ಞರನ್ನು ಮತ್ತು 88 ದಂತ ಆರೋಗ್ಯಾಧಿಕಾರಿಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ.<br><br>ಎಂಬಿಬಿಎಸ್ ಪದವಿ ಪೂರೈಸಿದ ಮತ್ತು ಸ್ನಾತಕೋತ್ತರ ಪದವಿ ಪೂರೈಸಿದ ವೈದ್ಯ ಅಭ್ಯರ್ಥಿಗಳನ್ನು ಒಂದು ವರ್ಷದ ಕಡ್ಡಾಯ ಸರ್ಕಾರಿ ಸೇವೆಗೆ ನೇಮಿಸುವ ಮೂಲಕ ವೈದ್ಯರುಗಳ ಕೊರತೆ ನೀಗಿಸಲು |

| | ನೇಮಕ ಮಾಡಲಾದ ವೈದ್ಯರ ಸಂಖ್ಯೆ | ಹುದ್ದೆಗೆ ಹಾಜರಾದ ವೈದ್ಯರ ಸಂಖ್ಯೆ |
|---|---|---|
| ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ | 1048 | 855 |
| ತಜ್ಞ ವೈದ್ಯರು | 692 | 343 |

| | | |
|---|---|---|
| | | ಕ್ರಮಕೈಗೊಳ್ಳಲಾಗುತ್ತಿದ್ದು, 2021ನೇ ಸಾಲಿನಲ್ಲಿ ಎಂಬಿಬಿಎಸ್ ಪದವಿ ಪೂರೈಸಿದ 2050 ವೈದ್ಯ ಅಭ್ಯರ್ಥಿಗಳನ್ನು 01 ವರ್ಷದ ಕಡ್ಡಾಯ ಸೇವೆಗಾಗಿ ಸ್ಥಳ ನಿಯುಕ್ತಿಗೊಳಿಸಲಾಗಿದ್ದು, ಈ ಪೈಕಿ 1731 ವೈದ್ಯರು ಹಾಜರಾಗಿ ಸೇವೆ ಸಲ್ಲಿಸುತ್ತಿದ್ದಾರೆ.<br><br>ಸೇವಾನಿರತ ಸ್ನಾತಕೋತ್ತರ (ಆರ್ ಜಿ ಹೆಚ್ ಎಸ್/ಡಿಎನ್ ಬಿ/ ಸಿಪಿಎಸ್/ ಎಂಪಿಹೆಚ್) ವ್ಯಾಸಂಗ ಪೂರೈಸಿ ಬರುವ ತಜ್ಞ ವೈದ್ಯರನ್ನು ಖಾಲಿ ಇರುವ ಹುದ್ದೆಗೆ ನೇಮಿಸಲಾಗುತ್ತಿದೆ.<br><br>ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದ ದಿನಾಂಕ:20-5-2021ರ ನಡವಳಿಗಳಲ್ಲಿನ ಅನುಮೋದನೆಯಂತೆ ರಾಜ್ಯದಲ್ಲಿ ಒಟ್ಟು 3006 ಸಮುದಾಯ ಆರೋಗ್ಯ ಅಧಿಕಾರಿಗಳನ್ನು ನೇಮಕಾತಿ ಮಾಡಿಕೊಂಡಿದ್ದು, ಸದರಿ ಅಧಿಕಾರಿಗಳನ್ನು ದಿನಾಂಕ:23-11-2021ರಿಂದ 04 ತಿಂಗಳುಗಳ ಕಾಲ ನಡೆಯಲಿರುವ ಸಮುದಾಯ ಆರೋಗ್ಯ ತರಬೇತಿ ಕಾರ್ಯಕ್ರಮಕ್ಕೆ ನಿಯೋಜಿಸಲಾಗಿದ್ದು, ಮಾರ್ಚ್ 2022 ರ ಅಂತ್ಯದೊಳಗೆ ಆ ಅಧಿಕಾರಿಗಳನ್ನು ಉಪ ಕೇಂದ್ರಗಳ ಮಟ್ಟದ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿನ ಸೇವೆಗೆ ನಿಯುಕ್ತಿಗೊಳಿಸಲಾಗುವುದು. |

**ಆಕುಕ 174 ಎಸ್.ಎಂ.ಎಂ. 2021**

(ಡಾ. ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು